# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಅರಣ್ಯ ಇಲಾಖೆಯಲ್ಲಿನ ಅರಣ್ಯ ರಕ್ಷಕ ವೃಂದದ ಹುದ್ದೆಯನ್ನು ಗಸ್ತು ಅರಣ್ಯ ಪಾಲಕ (Beat Forester) ಎಂದು ಪುನರ್ ಪದನಾಮೀಕರಿಸುವ ಕುರಿತು.

**ಓದಲಾಗಿದೆ:** ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ (ಅರಣ್ಯ ಪಡೆ ಮುಖ್ಯಸ್ಥರು)ರವರ ಪತ್ರ ಸಂಖ್ಯೆ: ಪಿಸಿಸಿಎಫ್ (ಅಪಮು)/ಬಿ3/ಸಿಬ್ಬಂದಿ/ಸಿಆರ್-116/2020-21, ದಿನಾಂಕ:13-06-2022.

-*******-

**ಪ್ರಸ್ತಾವನೆ:**

ಮೇಲೆ ಓದಲಾದ ಪ್ರಸ್ತಾವನೆಯಲ್ಲಿ, ಅರಣ್ಯ ರಕ್ಷಕರ ಪದನಾಮವನ್ನು "ಗಸ್ತು ಅರಣ್ಯ ಅಧಿಕಾರಿ" (Beat Forest Officer) ಎಂದು ಬದಲಾವಣೆ ಮಾಡಲು ಇರುವ ಸಾಧಕ-ಬಾಧಕಗಳ ಬಗ್ಗೆ ಚರ್ಚಿಸಿ, ವರದಿ ನೀಡಲು ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ (ಅಭಿವೃದ್ಧಿ)ರವರ ಅಧ್ಯಕ್ಷತೆಯಲ್ಲಿ ಒಂದು ಸಮಿತಿಯನ್ನು ರಚಿಸಲಾಗಿರುತ್ತದೆ. ಸದರಿ ಸಮಿತಿಯು ದಿನಾಂಕ: 03-01-2022, 11-05-2022 ಮತ್ತು 27-05-2022 ರಂದು ಸಭೆಗಳನ್ನು ನಡೆಸಿ, ಈ ವಿಷಯದ ಕುರಿತು ಸಮಗ್ರವಾಗಿ ಚರ್ಚಿಸಿ, "ಅರಣ್ಯ ರಕ್ಷಕರು" (Forest beat guard) ಎಂಬ ಪದನಾಮವನ್ನು "ಗಸ್ತು ಅರಣ್ಯ ಪಾಲಕರು" (Beat Forester) ಎಂದು ಬದಲಾವಣೆ ಮಾಡುವ ಕುರಿತು ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ (ಅರಣ್ಯ ಪಡೆ ಮುಖ್ಯಸ್ಥರು) ಇವರು ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಮೇಲ್ಕಂಡ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಸರ್ಕಾರವು ಆದೇಶಿಸಿದೆ.

## ಸರ್ಕಾರದ ಆದೇಶ ಸಂಖ್ಯೆ: ಅಪಜೀ 91 ಅಅಸೇ 2020, ದಿನಾಂಕ:29.11.2022.

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ ಅರಣ್ಯ ಇಲಾಖೆಯಲ್ಲಿನ ಅರಣ್ಯ ರಕ್ಷಕ (Forest Guard) ಹುದ್ದೆಯ ವೇತನ ಶ್ರೇಣಿ, ನೇಮಕಾತಿ ವಿಧಾನ ಅಥವಾ ಕರ್ತವ್ಯ ಮತ್ತು ಜವಾಬ್ದಾರಿಗಳಲ್ಲಿ ಯಾವುದೇ ಬದಲಾವಣೆ ಇಲ್ಲದೇ ಅರಣ್ಯ ರಕ್ಷಕ (Forest Guard) ಪದನಾಮವನ್ನು "ಗಸ್ತು ಅರಣ್ಯ ಪಾಲಕರು" (Beat Forester) ಎಂದು ಮರು ಪದನಾಮೀಕರಿಸಿ, ಆದೇಶಿಸಿದೆ.

ಈ ಸಂಬಂಧ ಅರಣ್ಯ ಇಲಾಖೆಯ ವೃಂದ ನೇಮಕಾತಿ ನಿಯಮಗಳಲ್ಲಿ ಅರಣ್ಯ ರಕ್ಷಕ ಹುದ್ದೆಗೆ ಅನ್ವಯಿಸುವಂತೆ ಸೂಕ್ತ ತಿದ್ದುಪಡಿ ತರಲು, ಪ್ರತ್ಯೇಕ ಕ್ರಮ ಕೈಗೊಳ್ಳಲಾಗುವುದು.

ಸದರಿ ಆದೇಶವನ್ನು ಆರ್ಥಿಕ ಇಲಾಖೆಯ ಹಿಂಬರಹ ಸಂಖ್ಯೆ: ಆಇ 582 ವೆಚ್ಚ-5/2022, ದಿನಾಂಕ: 28-10-2022 ಮತ್ತು ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ (ಸೇವಾ ನಿಯಮಗಳು) ಇಲಾಖೆಯ ಹಿಂಬರಹ ಸಂಖ್ಯೆ: ಸಿಆಸುಇ 125 ಸೇನೆಡಿ 2022, ದಿನಾಂಕ: 10-08-2022ರನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಗೀತಾ ವಿರ ಪಾಟೀಲ)
ಸರ್ಕಾರದ ಅಧೀನ ಕಾರ್ಯದರ್ಶಿ,
ಅರಣ್ಯ, ಜೀವಿಪರಿಸ್ಥಿತಿ ಮತ್ತು ಪರಿಸರ ಇಲಾಖೆ (ಸೇವೆಗಳು)

ನೋಡಲ್ ಅಧಿಕಾರಿ, ಇ-ಗೆಜೆಟ್ ಹಾಗೂ ಸರ್ಕಾರದ ಅಧೀನ ಕಾರ್ಯದರ್ಶಿ, ಅರಣ್ಯ, ಜೀವಿಪರಿಸ್ಥಿತಿಮತ್ತು ಪರಿಸರ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು - ರಾಜ್ಯ ಪತ್ರದಲ್ಲಿ ಪ್ರಕಟಿಸುವ ಸಲುವಾಗಿ ಕಳುಹಿಸಿದೆ.

..........2



Scanned with CamScanner